# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 729 |
| ಸದಸ್ಯರ ಹೆಸರು | : | ಶ್ರೀಮತಿ ಬಲ್ಕೀಸ್ ಬಾನು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 12.12.2025. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಪ್ರತಿ ತಿಂಗಳು ವೇತನ ನೀಡಲಾಗುತ್ತಿದೆಯೇ; | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 113 ರಂತೆ ಗ್ರಾಮ ಪಂಚಾಯತಿಯ ಸಿಬ್ಬಂದಿಗಳ ವೇತನವನ್ನು ಗ್ರಾಮ ಪಂಚಾಯತಿ ನಿಧಿಯಿಂದ ಅಂದರೆ ಸ್ವಂತ ಸಂಪನ್ಮೂಲದಿಂದ ಪಾವತಿಸಲಾಗುತ್ತಿದೆ.<br><br>ಮುಂದುವರೆದು, ಸರ್ಕಾರವು ಗ್ರಾಮ ಪಂಚಾಯತಿಗಳ ಸಿಬ್ಬಂದಿಗಳ ಸಂಖ್ಯೆಗೆ ಅನುಗುಣವಾಗಿ ಅವರ ವೇತನಕ್ಕೆ ಅಗತ್ಯವಿರುವ ಅನುದಾನವನ್ನು ತ್ರೈಮಾಸಿಕವಾಗಿ ನೇರವಾಗಿ ಗ್ರಾಮ ಪಂಚಾಯತಿ ಖಾತೆಗಳಿಗೆ ಬಿಡುಗಡೆಗೊಳಿಸಲಾಗುತ್ತಿದೆ. ಆಯಾ ಗ್ರಾಮ ಪಂಚಾಯತಿಗಳ ಹಂತದಲ್ಲಿ ಸಿಬ್ಬಂದಿಗಳ ಹಾಜರಾತಿಗೆ ಅನುಗುಣವಾಗಿ ವೇತನವನ್ನು ಪಾವತಿಸಲಾಗುತ್ತಿದೆ. |
| (ಆ) | ಇಲ್ಲದಿದ್ದಲ್ಲಿ, ಎಷ್ಟು ತಿಂಗಳ ವೇತನ ಪಾವತಿ ಬಾಕಿ ಇರುತ್ತದೆ; ಸಿಬ್ಬಂದಿಗಳಿಗೆ ಬಾಕಿ ವೇತನ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು; (ಜಿಲ್ಲಾವಾರು ವಿವರ ನೀಡುವುದು) | |
| (ಇ) | ಗ್ರಾಮ ಪಂಚಾಯಿತಿ ವ್ಯಾಪ್ತಿ ಸಿಬ್ಬಂದಿಗಳಿಗೆ ಉಚಿತವಾಗಿ ಆರೋಗ್ಯ ವಿಮೆ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: RDPR 7 GPC 2024, ದಿನಾಂಕ:10-08-2024 ರಲ್ಲಿ ಗ್ರಾಮ ಪಂಚಾಯತಿ ನೌಕರರು ಅನಾರೋಗ್ಯಕ್ಕೆ ಒಳಗಾದಾಗ ಗರಿಷ್ಠ ರೂ. 50000/- ಗಳ ವರೆಗಿನ ಚಿಕಿತ್ಸಾ ವೆಚ್ಚವನ್ನು ಒಂದು ಬಾರಿಗೆ ಮಾತ್ರ ಜಿಲ್ಲಾ ಪಂಚಾಯತಿಯ ಆಶ್ವಾಸನಾ ನಿಧಿಯಿಂದ ಭರಿಸಿ, ಪಾವತಿಸಲು ಅವಕಾಶ ನೀಡಲಾಗಿರುತ್ತದೆ.<br><br>ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಆಕುಕ 324 ಸಿಜಿಇ 2025, ದಿನಾಂಕ:24.06.2025ರಲ್ಲಿ 2025-26ನೇ ಸಾಲಿನ ಆಯವ್ಯಯ ಘೋಷಣೆ ಸಂಖ್ಯೆ:140 ರಂತೆ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ/ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ 3 ಲಕ್ಷಕ್ಕೂ ಅಧಿಕ ಸಿಬ್ಬಂದಿ ಹಾಗೂ ಅವಲಂಬಿತರಿಗೆ 5 ಲಕ್ಷ ರೂ.ವರೆಗೆ ನಗದು ರಹಿತ ಆರೋಗ್ಯ ಭರವಸೆಗಾಗಿ "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ –ಖಾಯಂ ಅಲ್ಲದ ಸಿಬ್ಬಂದಿಗಳಿಗೆ [Karnataka Arogya Suraksha Sanjeevini-Non-Permanent Employees (KASS-NPE) ಯೋಜನೆಗೆ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. |

| | | |
|---|---|---|
| | | ಈ ಯೋಜನೆಯಡಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಪಂಚಾಯಿತಿ ಸಿಬ್ಬಂದಿ ಮತ್ತು ಇವರುಗಳ ಅವಲಂಬಿತರಿಗೆ ಆರೋಗ್ಯ ಭದ್ರತೆ ನೀಡಲು ಯೋಜನೆ ರೂಪಿಸಿದ್ದು, ಸಿಬ್ಬಂದಿ ಮತ್ತು ಅವರ ಅವಲಂಬಿತರ ಮಾಹಿತಿಯನ್ನು ಸಂಗ್ರಹಿಸಿದ್ದು, ಸದರಿಯವರನ್ನು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯಡಿಯಲ್ಲಿ ತರುವ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. |
| (ಈ) | ಪ್ರತಿ ಗ್ರಾಮ ಗ್ರೇಡ್-1 ಗ್ರಾಮ ಪಂಚಾಯಿತಿಗಳಿಗೆ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಉನ್ನತೀಕರಿಸಿ, ಪ್ರಥಮ ದರ್ಜೆ ಲೆಕ್ಕ ಸಹಾಯಕ ಹುದ್ದೆಗೆ ಬಡ್ತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು) | ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ:** ಗ್ರಾಅಪ 962 ಗ್ರಾಪಂಅ 2025

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.